ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 05/03/2020

---

ನಮ್ಮದು ಅಂತ್ಯಂತ ಚಲನಶೀಲ ಸಂವಿಧಾನ | ಅಂಬೇಡ್ಕರ್ ಕಾರ್ಯದ ಬಗ್ಗೆ ಸಂಶಯವಿಲ್ಲ: ಸಿಎಂ

# ಸಂವಿಧಾನ ಬದಲಾವಣೆ ಅರ್ಥವಿಲ್ಲದ ವಾದ

5/3/2020

**ವಿಶ್ವವಾಣಿ ಸುದ್ದಿಮನೆ** ವಿಧಾನಸಭೆ

ಸಂವಿಧಾನ ಬದಲಾವಣೆಯಾಗಲಿದೆ ಎಂಬ ಕೂಗು ಕಪೋಲಕಲ್ಪಿತವಾಗಿದ್ದು, ಸಂವಿಧಾನವನ್ನು ಯಾರಿಂದಲೂ ಬದಲಾವಣೆ ಮಾಡಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪ್ರತಿಪಾದಿಸಿದ್ದಾರೆ.

ಸಂವಿಧಾನ ಕುರಿತ ವಿಶೇಷ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಂವಿಧಾನ ಬದಲಾವಣೆಯ ಮಾತು ಆಗಾಗ ಕೇಳಿ ಬರುತ್ತಿದೆಯಾದರೂ ಇದು ಪೊಳ್ಳು ಹಾಗೂ ಅರ್ಥವಿಲ್ಲದ ವಾದವಾಗಿದೆ. ಸಂವಿಧಾನವನ್ನು ಬದಲಾಯಿಸಲು ಯಾರಿಂದಲೂ ಸಾಧ್ಯವಿಲ್ಲ, ನಮ್ಮ ಸಂವಿಧಾನ ಅತ್ಯಂತ ಚಲನಶೀಲವಾಗಿದ್ದು, ಇದನ್ನು ಬದಲಿಸಲು, ಅಳಿಸಲು ಸಾಧ್ಯವೇ ಇಲ್ಲ ಎಂದರು. ಅಧಿಕಾರದಲ್ಲಿರುವವರು ಯಾರೂ ಪ್ರಭುಗಳಲ್ಲ, ಎಲ್ಲರೂ ಸಮಾನರು. ವಿಚಿತ್ರ ಎಂದರೆ ಸ್ವಾತಂತ್ರ್ಯ ಪೂರ್ವದಲ್ಲಿ ದೇಶಕ್ಕಾಗಿ ನಾವು ಬದುಕಿದ್ದೇವೆ ಎನ್ನುವ ವಾತಾವರಣವಿತ್ತು. ಸ್ವಾತಂತ್ರ್ಯ ಬಂದ ಮೇಲೆ ದೇಶ ಇರುವುದೇ ನಮಗಾಗಿ ಎನ್ನಲಾಗುತ್ತಿದೆ. ದೇಶ ಪ್ರೇಮ ಎಲ್ಲದಕ್ಕೂ ಮಿಗಿಲು ಎಂದರು.

**ಕೊಲೆ, ಸುಲಿಗೆ, ಭ್ರಷ್ಟಾಚಾರ ಹೆಚ್ಚು:** ದೇಶದಲ್ಲಿ ಮಹಿಳೆಯರು ರಾತ್ರಿ ವೇಳೆಯಲ್ಲಿ ಓಡಾಡುವ ಮುಕ್ತ ವಾತಾವರಣವಿಲ್ಲ, ಕೊಲೆ, ಸುಲಿಗೆ, ಭ್ರಷ್ಟಾಚಾರ ಹೆಚ್ಚುತ್ತಿದೆ. ವರ್ಗಾವಣೆಯೇ ಭ್ರಷ್ಟಾಚಾರದ ಮೂಲವಾಗಿದೆ.



ಸಂವಿಧಾನ ಕುರಿತ ವಿಶೇಷ ಚರ್ಚೆಯಲ್ಲಿ ಸಿಎಂ ಯಡಿಯೂರಪ್ಪ ಪಾಲ್ಗೊಂಡು ಮಾತನಾಡಿದರು.

ಶೇ.63ರಷ್ಟು ಜನ ಲಂಚ ತೆಗೆದುಕೊಳ್ಳುತ್ತಾರೆ ಎಂದು ಕಾಂಗ್ರೆಸ್‌ನ ಎಚ್.ಕೆ. ಪಾಟೀಲ್ ಅವರು ಹೇಳಿರುವುದು ಸರಿಯಾಗಿದೆ. ಇಂತಹ ವ್ಯವಸ್ಥೆಗೆ ಜನಪ್ರತಿನಿಧಿಗಳಾದ ನಾವೆಲ್ಲರೂ ಕಾರಣವಾಗಿದ್ದು, ಈ ಕುರಿತು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದರು.

ಸಂವಿಧಾನದ ಮೂಲಕ ಪ್ರತಿಯೊಬ್ಬರ ಬದುಕು ಹಸನಾಗಬೇಕು. ಡಾ. ಬಿ.ಆರ್ ಅಂಬೇಡ್ಕರ್ ಇಷ್ಟೊಂದು ಪರಿಶ್ರಮ ಪಡೆದಿದ್ದರೆ ಇಂತಹ ಸಂವಿಧಾನ ರಚನೆ ಸಾಧ್ಯವಾಗುತ್ತಿರಲಿಲ್ಲ. ಬೇರೆ ಯಾವುದೇ ದೇಶಕ್ಕೆ ಹೋಲಿಸಿದರೆ ಅತ್ಯಂತ ಎತ್ತರದ ಸ್ಥಾನದಲ್ಲಿರುವ ಸಂವಿಧಾನ ನಮ್ಮದು ಎನ್ನುವ ಹೆಮ್ಮೆ ಇದೆ ಎಂದರು. ಸಂವಿಧಾನದ ಮೇಲೆ ಬೇರೆ ರಾಜ್ಯಗಳಲ್ಲಿ ಚರ್ಚೆಯಾಗಿಲ್ಲ. ಇದೊಂದು ಯಶಸ್ವಿಯಾದ ಪ್ರಯತ್ನವಾಗಿದ್ದು, ಇಡೀ ದೇಶಕ್ಕೆ ಮಾದರಿಯಾಗುವ ರೀತಿಯಲ್ಲಿ ಸಂವಿಧಾನದ ಬಗ್ಗೆ ಬೆಳಕು ಚೆಲ್ಲಿದ್ದು ಉತ್ತಮ ಬೆಳವಣಿಗೆ. ಈ ಕುರಿತ ಚರ್ಚೆಗೆ ಅನುಗುಣವಾಗಿ ನಾವೆಲ್ಲರೂ ನಡೆದುಕೊಂಡಾಗ ಚರ್ಚೆ ಸಾರ್ಥಕವಾಗುತ್ತದೆ ಎಂದರು.

## ರೈತರ ಅಭಿವೃದ್ಧಿ ಸಾಧ್ಯವಾಗುತ್ತಿಲ್ಲ

ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳು ಉರುಳಿದರೂ ಸಹ ದೇಶದ ರೈತರ ಅಭಿವೃದ್ಧಿ ಸಾಧ್ಯವಾಗುತ್ತಿಲ್ಲ. ದಲಿತರ ಪರಿಸ್ಥಿತಿ ನೋಡಿದರೆ ದೇಶಕ್ಕೆ ಸ್ವಾತಂತ್ರ್ಯ ಬಂದಿದೆಯಾ ಎಂಬ ಸಂದೇಹ ಮೂಡುತ್ತದೆ. ನಾವು ಸ್ವಲ್ಪ ಮನಸ್ಸು ಮಾಡಿದರೆ, ಸಂಕಟಗಳಿಗೆ ಸ್ಪಂದಿಸಬಹುದು. ಈ ನಿಟ್ಟಿನಲ್ಲಿ ನಮ್ಮ ಮನೋಧೋರಣೆಯಲ್ಲಿ ಬದಲಾವಣೆಯಾಗಬೇಕು ಎಂದು ಹೇಳಿದರು.